**ಕರ್ನಾಟಕ ಸರ್ಕಾರ**

ಸಂ. ಕಂಇ 158 ಟಿಎನ್‌ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ:28-04-2021

## ಮನವಿ

ರಾಜ್ಯದಲ್ಲಿ ಕೋವಿಡ್-19ರ ಪ್ರಸರಣವನ್ನು ತಡೆಗಟ್ಟುವ ನಿಟ್ಟಿನಲ್ಲಿ ದಿನಾಂಕ:20-04-2021ರ ಸಮ ಸಂಖ್ಯೆಯ ಆದೇಶದೊಂದಿಗೆ ಮಾರ್ಗಸೂಚಿಗಳನ್ನು ವಿಪತ್ತು ನಿರ್ವಹಣಾ ಅಧಿನಿಯಮ, 2005ರ ಪ್ರಕರಣ 24ರ ಅಡಿಯಲ್ಲಿ ಹೊರಡಿಸಲಾಗಿರುತ್ತದೆ. ಈ ಆದೇಶದಲ್ಲಿ ಸೋಂಕು ಪ್ರಸರಣವನ್ನು ತಡೆಗಟ್ಟಲು ವಾರದ ದಿನಗಳ ಮತ್ತು ವಾರಾಂತ್ಯದ ಕರ್ಫ್ಯೂವನ್ನು ವಿಧಿಸಲಾಗಿರುತ್ತದೆ. ಮುಂದುವರೆದು, ದಿನಾಂಕ:26.04.2021ರ ಆದೇಶದಲ್ಲಿ ಕರ್ಫ್ಯೂ ಅವಧಿಯನ್ನು ದಿನಾಂಕ:12.05.2021ರವರೆಗೆ ವಿಸ್ತರಿಸಿದ್ದು, ಜನರ ಸಂಚಾರಕ್ಕೆ ಇನ್ನೂ ಹೆಚ್ಚಿನ ಕಟ್ಟುನಿಟ್ಟಿನ ಕ್ರಮಗಳನ್ನು ಅನುಸರಿಸಲು ತೀರ್ಮಾನಿಸಿ ಆದೇಶಿಸಿದೆ.

ಕೋವಿಡ್-19 ರ ಪ್ರಕರಣಗಳ ಸಂಖ್ಯೆ ಹಾಗೂ ಕೋವಿಡ್ ಸೋಂಕು ದೃಢಪಡುತ್ತಿರುವ ಪ್ರಮಾಣ ಏರುಗತಿಯಲ್ಲಿದೆ. ಪ್ರಸ್ತುತ ಸನ್ನಿವೇಶದಲ್ಲಿ ಪ್ರಸರಣದ ಸರಪಳಿಯನ್ನು ತುಂಡರಿಸಲು ಅತ್ಯಂತ ಕಠಿಣ ನಿರ್ಬಂಧಕ ಕ್ರಮಗಳನ್ನು ತೆಗೆದುಕೊಳ್ಳುವ ಅಗತ್ಯತೆ ಕಂಡುಬಂದಿದೆ. ಅಲ್ಲದೆ, ಇಂತಹ ದುಸ್ಥಿತಿಯಲ್ಲಿ ಹಲವು ಭೂ ಮಾಲೀಕರು / ಮನೆ / ವಸತಿ ಗೃಹ / ಪಿಜಿ / ಅಂಗಡಿ ಮಾಲೀಕರು ಬಾಡಿಗೆ ಮತ್ತು ಭೋಗ್ಯದ ಆಧಾರದ ಮೇಲೆ ನೀಡಿರುವ ಸ್ಥಳಗಳು / ಗೃಹಗಳನ್ನು ಬಾಡಿಗೆದಾರರಿಂದ ತೆರವುಗೊಳಿಸುವ ಕ್ರಮಕ್ಕೆ ಮುಂದಾಗಿದೆ.

ಈ ಕರ್ಫ್ಯೂ ಅವಧಿಯಲ್ಲಿ ಉದ್ಯೋಗದಾತರು ತನ್ನ ಉದ್ಯೋಗಸ್ಥರನ್ನು ಕರ್ತವ್ಯದಿಂದ ತೆಗೆದುಹಾಕುತ್ತಿರುವ ಕ್ರಮವು ಸರ್ಕಾರದ ಗಮನಕ್ಕೆ ಬಂದಿದೆ.

ಅಂಗಡಿ ಮಾಲೀಕರು ವ್ಯಾಪಾರಕ್ಕಾಗಿ ಬಾಡಿಗೆಗೆ ನೀಡಲಾಗಿರುವ ಅಂಗಡಿ ಮತ್ತು ಅಂತಹುದೇ ಸ್ಥಳಗಳನ್ನು ಬಾಡಿಗೆದಾತರಿಂದ ತೆರವುಗೊಳಿಸಲು ಕ್ರಮವಹಿಸುತ್ತಿರುವುದೂ ಸರ್ಕಾರದ ಗಮನಕ್ಕೆ ಬಂದಿದೆ.

ಆದ್ದರಿಂದ, ಸಾರ್ವಜನಿಕರ ಹಿತದೃಷ್ಟಿಯಿಂದ ಮತ್ತು ಕೋವಿಡ್-19 ಸೋಂಕು ನಿರ್ಮೂಲನೆ ಕ್ರಮದ ಅವಶ್ಯಕತೆಯಿಂದ ವಿಪತ್ತು ನಿರ್ವಹಣಾ ಅಧಿನಿಯಮ, 2005 ರ ಪ್ರಕರಣ 24 ರ ಅಡಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ ರಾಜ್ಯ ಕಾರ್ಯಕಾರಿ ಸಮಿತಿಯ ಅಧ್ಯಕ್ಷನಾಗಿ ಈ ಕೆಳಗೆ ಸಹಿ ಮಾಡಿರುವ ನಾನು ಈ ಮೂಲಕ ಕೆಳಕಂಡಂತೆ ಮನವಿ ಮಾಡುತ್ತಿದೇನೆ.

ಯಾವುದೇ ಉದ್ಯೋಗದಾತರು ತನ್ನ ಉದ್ಯೋಗಸ್ಥರನ್ನು ಕರ್ಫ್ಯೂ ಅವಧಿಯಲ್ಲಿ ಕೆಲಸದಿಂದ ವಜಾಗೊಳಿಸದಿರಲು ಹಾಗೂ ಅವರುಗಳ ವೇತನವನ್ನು ಕಡಿತಗೊಳಿಸದಿರಲು ಮನವಿ ಮಾಡಿದೆ.

ಮನೆ ಮಾಲೀಕರು, ಮನೆಗಳನ್ನು / ಪಿಜಿ / ಅಂಗಡಿಗಳನ್ನು ಬಾಡಿಗೆ ಅಥವಾ ಭೋಗ್ಯದ ಆಧಾರದ ಮೇಲೆ ನೀಡಿರುವ ಮೇಲ್ಕಂಡವರನ್ನು ಅವರನ್ನು ಸದರಿ ವಾಸದಿಂದ ಬಲವಂತವಾಗಿ ತೆರವುಗೊಳಿಸದಿರಲು ಮನವಿ ಮಾಡಿದೆ.

(ಪಿ. ರವಿಕುಮಾರ್)
ಸರ್ಕಾರದ ಮುಖ್ಯ ಕಾರ್ಯದರ್ಶಿ ಹಾಗೂ
ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ
ರಾಜ್ಯ ಕಾರ್ಯಕಾರಿ ಸಮಿತಿಯ ಅಧ್ಯಕ್ಷರು

**ಇವರಿಗೆ:**
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು.